ಮಹಾನಗರಪಾಲಿಕೆ ಕಾರ್ಯಾಲಯ
ದಾವಣಗೆರೆ – 577002

CITY CORPORATION
DAVANAGERE - 577002

Phone No. 08192-252899,
08192-232008

Email ID: itstaff_ulb_davanagere@yahoo.com
Website: www.davanagerecity.mrc.gov.in.

ದಾಮಪಾ/ಸಾಆವಿ/ಸಿಬ್ಬಂದಿ-3/ಸಿಆರ್/167/2022-23 ದಿನಾಂಕ: 12.01.2023

## ಅಧಿಸೂಚನೆ

ದಾವಣಗೆರೆ ಮಹಾನಗರಪಾಲಿಕೆಯಲ್ಲಿ ಖಾಲಿ ಇರುವ ಈ ಕೆಳಕಂಡ ನೇರ ನೇಮಕಾತಿ ಪೌರಕಾರ್ಮಿಕರ ಹುದ್ದೆಗಳನ್ನು ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ಸಂಖ್ಯೆ: ನಅಇ 171 ಎಂಎನ್ಇ 2022(ಇ), ದಿನಾಂಕ: 23.11.2022 ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಯುಡಿಡಿ 188 ಎಂಎನ್ಇ 2022(ಇ), ದಿನಾಂಕ: 20-12-2022 ರ ಅನ್ವಯ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ, 1976ರ (ಕರ್ನಾಟಕ ಕಾಯ್ದೆ 1977ರ ಸಂಖ್ಯೆ 14)ರ ಕಲಂ 421 ನೇ ಉಪ ಕಲಂ 1ರ ರೀತ್ಯಾ ಪ್ರದತ್ತವಾದ ಅಧಿಕಾರವನ್ನು ಬಳಸಿಕೊಂಡು ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ರಾಜ್ಯದ ಪಾಲಿಕೆಗಳ ಪೌರಕಾರ್ಮಿಕರ ನೇಮಕಾತಿ) (ವಿಶೇಷ) ನಿಯಮಗಳು-2022ರಡಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ಹುದ್ದೆಯ ವಿವರ ಮತ್ತು ವೇತನ ಶ್ರೇಣಿ | ಖಾಲಿ ಹುದ್ದೆಗಳ ಸಂಖ್ಯೆ | ಅರ್ಹತೆಗಳು |
|---|---|---|---|
| 1 | ಪೌರಕಾರ್ಮಿಕರು (ವೇತನ ಶ್ರೇಣಿ: ರೂ. 17,000 – 28,950) | 114 | 1. ಕನ್ನಡ ಮಾತನಾಡಲು ಗೊತ್ತಿರಬೇಕು.<br>2. ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ನೇರಪಾವತಿ, ಕ್ಷೇಮಾಭಿವೃದ್ಧಿ, ದಿನಗೂಲಿ, ಗುತ್ತಿಗೆ, ಸಮಾನ ಕೆಲಸಕ್ಕೆ ಸಮಾನ ವೇತನ, ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರು, ಲೋಡರ್ಸ್ ಮತ್ತು ಕ್ಲೀನರ್ಸ್ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>3. ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ಸಂಖ್ಯೆ: ನಅಇ 171 ಎಂಎನ್ಇ 2022(ಇ), ದಿನಾಂಕ: 23.11.2022ರ ಅಧಿಸೂಚನೆ ಜಾರಿಗೆ ಬಂದ ದಿನಾಂಕಕ್ಕೆ ಗರಿಷ್ಠ ವಯೋಮಿತಿ 55 ವರ್ಷಗಳನ್ನು ಮೀರತಕ್ಕದ್ದಲ್ಲ. |

**ಹುದ್ದೆಗಳ ವರ್ಗೀಕರಣ:**

| ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ಖಾಲಿ ಇರುವ ನೇರ ನೇಮಕಾತಿ ಪೌರಕಾರ್ಮಿಕರು – ಒಟ್ಟು ಹುದ್ದೆಗಳ ವಿವರ | | | | | | | | | |
|---|---|---|---|---|---|---|---|---|---|
| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ | ಯೋ.ನಿ | ಕ.ಮಾ.ಅ | ಅಂ.ವಿ | ತೃ.ಲಿಂ | ಒಟ್ಟು |
| ಪ.ಜಾ | 2 | 7 | 5 | 1 | 1 | 1 | 1 | 1 | 19 |
| ಪ.ಪಂ | 2 | 3 | 2 | 0 | 0 | 0 | 1 | 0 | 8 |
| ಪ್ರ-1 | 1 | 2 | 1 | 0 | 0 | 0 | 1 | 0 | 5 |
| ಪ್ರ-2ಎ | 2 | 6 | 5 | 1 | 1 | 1 | 1 | 0 | 17 |
| ಪ್ರ-2ಬಿ | 1 | 2 | 1 | 0 | 0 | 0 | 1 | 0 | 5 |
| ಪ್ರ-3ಎ | 1 | 1 | 1 | 0 | 0 | 0 | 1 | 0 | 4 |
| ಪ್ರ-3ಬಿ | 1 | 2 | 1 | 0 | 0 | 0 | 1 | 0 | 5 |
| ಸಾ.ಅ | 8 | 17 | 13 | 5 | 2 | 2 | 3 | 1 | 51 |
| ಒಟ್ಟು | 18 | 40 | 29 | 7 | 4 | 4 | 10 | 2 | 114 |

| ಅರ್ಜಿ ವಿವರ | ದಿನಾಂಕ | ವಿಳಾಸ |
|---|---|---|
| ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 13-01-2023 | ದಾವಣಗೆರೆ ಮಹಾನಗರ ಪಾಲಿಕೆ ಕೇಂದ್ರ ಕಛೇರಿ, ರೈಲ್ವೆ ನಿಲ್ದಾಣ ಎದುರು, ಪಿ.ಬಿ ರಸ್ತೆ, ದಾವಣಗೆರೆ. |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 14-02-2023 | |

ವಿಶೇಷ ಸೂಚನೆ:

1. ಅಧಿಸೂಚನೆಯನ್ನು ದಾವಣಗೆರೆ ಮಹಾನಗರ ಪಾಲಿಕೆ ವೆಬ್‌ಸೈಟ್ www.davanagerecity.mrc.gov.in ಹಾಗೂ ಮಹಾನಗರ ಪಾಲಿಕೆ ಕೇಂದ್ರ ಕಛೇರಿ ಹಾಗೂ ವಲಯ ಕಛೇರಿಗಳ ಸೂಚನಾ ಫಲಕದಲ್ಲಿ ವೀಕ್ಷಿಸಬಹುದು
2. ಈ ನೇಮಕಾತಿಯು ಸರ್ಕಾರದ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲ ಕಾಲಕ್ಕೆ ಹೊರಡಿಸಲಾಗುವ ಆದೇಶ/ ಸುತ್ತೋಲೆ/ಅಧಿಸೂಚನೆಗಳ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿದೆ.

12/01/2023

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ
ಹಾಗೂ ಆಯುಕ್ತರು, ಮಹಾನಗರಪಾಲಿಕೆ ದಾವಣಗೆರೆ

1. ಅರ್ಜಿ ಸಲ್ಲಿಸುವ ವಿಧಾನ

- ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 13-01-2023 (ಕಛೇರಿ ಕರ್ತವ್ಯದ ಅವದಿಯಲ್ಲಿ)
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 14-02-2023 (ಸಂಜೆ 05.30 ಗಂಟೆಯೊಳಗೆ)
- ಯಾವುದೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಬಾರಿ ಅರ್ಜಿ ಸಲ್ಲಿಸಿದಲ್ಲಿ, ಒಂದು ಅರ್ಜಿಯನ್ನು ಪರಿಗಣಿಸಿ ಉಳಿದಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು,
- ಅರ್ಜಿಗಳನ್ನು ಖುದ್ದಾಗಿ ಕಚೇರಿಗೆ ಸಲ್ಲಿಸತಕ್ಕದ್ದು. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅಂತಹವರ ವಿರುದ್ಧ ಪಾಲಿಕೆಯು ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.
- ಅರ್ಜಿ ಸಲ್ಲಿಸಲು ಶುಲ್ಕವಿರುವುದಿಲ್ಲ.

2. ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Cast |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ–1 | ಪ್ರವರ್ಗ–1 | CAT-1 | Category-1 |
| ಪ್ರ–2ಎ | ಪ್ರವರ್ಗ–2ಎ | 2A | Category-2A |
| ಪ್ರ–2ಬಿ | ಪ್ರವರ್ಗ–2ಬಿ | 2B | Category-2B |
| ಪ್ರ–3ಎ | ಪ್ರವರ್ಗ–3ಎ | 3A | Category-3A |
| ಪ್ರ–3ಬಿ | ಪ್ರವರ್ಗ–3ಬಿ | 3B | Category-3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Studied Candidate |
| ವಿ.ಚೇ | ವಿಕಲ ಚೇತನ | PH | Physically Handicapped Person |
| ಯೋ.ನಿ.ಅ | ಯೋಜನೆಯಿಂದ ನಿರಾಶ್ರಿತ ಅಭ್ಯರ್ಥಿ | PDP | Project Displaced person |
| ತೃ.ಲಿಂ. | ತೃತೀಯ ಲಿಂಗಿ | TG | Transgender |

3. ಅರ್ಹತಾ ಷರತ್ತುಗಳು:

ಎ) 1) ಭಾರತೀಯ ನಾಗರಿಕನಾಗಿರತಕ್ಕದ್ದು.

2) ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ 18 ವರ್ಷ ಪೂರ್ಣಗೊಂಡಿರಬೇಕು.

3) ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ಸಂಖ್ಯೆ: ನಅಇ 171 ಎಂಎನ್ಇ 2022(ಇ), ದಿನಾಂಕ: 23.11.2022ರ ಅಧಿಸೂಚನೆ ಜಾರಿಗೆ ಬಂದ ದಿನಾಂಕಕ್ಕೆ ಗರಿಷ್ಠ ವಯೋಮಿತಿ 55 ವರ್ಷಗಳನ್ನು ಮೀರತಕ್ಕದ್ದಲ್ಲ.

4) ದೈಹಿಕ ದೃಢತೆ ಇರತಕ್ಕದ್ದು. (ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿಯಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರ ಲಗತ್ತಿಸಬೇಕು)

5) ಕನ್ನಡ ಭಾಷೆ ಮಾತನಾಡುವ ಬಗ್ಗೆ ಜ್ಞಾನವಿರಬೇಕು. (ಕನ್ನಡ ಜ್ಞಾನದ ಬಗ್ಗೆ ಸ್ವಯಂ ಘೋಷಣಾ ಪತ್ರ ಲಗತ್ತಿಸಬೇಕು)

ಬಿ) ಅನರ್ಹತೆಯ ವಿಧಾನ:

1) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗುವುದಿಲ್ಲ.

2) ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರಬಾರದು.

3) ಈಗಾಗಲೇ ಗಂಭೀರ ಪ್ರಕರಣದ ಕಾರಣ ಸೇವೆಯಿಂದ ತೆಗೆದುಹಾಕಿರಬಾರದು.

4. ನೇಮಕಾತಿ ವಿಧಾನ:

1. ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ಹಾಲಿ ನೇರಪಾವತಿ, ಕ್ಷೇಮಾಭಿವೃದ್ಧಿ, ದಿನಗೂಲಿ, ಗುತ್ತಿಗೆ, ಸಮಾನ ಕೆಲಸಕ್ಕೆ ಸಮಾನ ವೇತನ, ಹೊರಗುತ್ತಿಗೆ ಆಧಾರದ ಮೇಲೆ 2 ವರ್ಷಕ್ಕಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿರುವ ಪೌರಕಾರ್ಮಿಕರು, ಲೋಡರ್ಸ್ ಮತ್ತು ಕ್ಲೀನರ್ಸ್ ಸೇವಾ ಹಿರಿತನದ ಆಧಾರದ ಮೇಲೆ ಪರಿಗಣಿಸಲಾಗುವುದು. ನೇಮಕಾತಿಯಲ್ಲಿನ ಆದ್ಯತೆಯನ್ನು ನೇರಪಾವತಿ, ಕ್ಷೇಮಾಭಿವೃದ್ಧಿ, ದಿನಗೂಲಿ, ಗುತ್ತಿಗೆ, ಸಮಾನ ಕೆಲಸಕ್ಕೆ ಸಮಾನ ವೇತನ, ಹೊರಗುತ್ತಿಗೆ ಹೀಗೆ ಅನುಕ್ರಮವಾಗಿ ಪರಿಗಣಿಸಲಾಗುವುದು.
2. ನೇರಪಾವತಿ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಸಂಬಂಧಿಸಿದಂತೆ ದಿನಾಂಕ: 23-11-2022 ಕ್ಕಿಂತ ಮುಂಚೆ ಕನಿಷ್ಠ 02 ವರ್ಷಗಳು ಮಹಾನಗರ ಪಾಲಿಕೆಯಲ್ಲಿ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ(ಇ.ಎಸ್.ಐ) ಮತ್ತು ಭವಿಷ್ಯ ನಿಧಿ(ಪಿ.ಎಫ್) ಹಾಜರಾತಿ ಮತ್ತು ವೇತನ ಪಡೆದ ದಾಖಲಾತಿಗಳನ್ನು ಪರಿಗಣಿಸಲಾಗುವುದು.
3. ಹೊರಗುತ್ತಿಗೆ ಪೌರಕಾರ್ಮಿಕರನ್ನು ಪರಿಗಣಿಸುವುದಕ್ಕಾಗಿ ದಿನಾಂಕ: 23-11-2022 ಕ್ಕಿಂತ ಮುಂಚೆ ಕನಿಷ್ಠ 02 ವರ್ಷಗಳು ಕಾರ್ಯನಿರ್ವಹಿಸಿರುವ ಮತ್ತು ಭವಿಷ್ಯ ನಿಧಿ, ಇಎಸ್.ಐ ಮತ್ತು ವೇತನದ ದಾಖಲೆಗಳನ್ನು ಪರಿಗಣಿಸಲಾಗುವುದು.
4. ಇಬ್ಬರು ಮತ್ತು ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿಯು ಸಮನಾಗಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಕುರಿತು ಆದ್ಯತಾ ಕ್ರಮವನ್ನು ವಯಸ್ಸಿನ ಆಧಾರದ ಮೇಲೆ ನಿಗದಿಪಡಿಸಲಾಗುವುದು. ಅಭ್ಯರ್ಥಿಗಳ ಜನ್ಮ ದಿನಾಂಕ ಮತ್ತು ಸೇವಾವಧಿ ಒಂದೇ ಆಗಿದ್ದಲ್ಲಿ ಲಾಟರಿ ಮೂಲಕ ಆಯ್ಕೆ ಮಾಡಲಾಗುವುದು.

5. ಸಲ್ಲಿಸಬೇಕಾದ ಮೀಸಲಾತಿ ಪ್ರಮಾಣ ಪತ್ರಗಳು:

ಜಾತಿ ಮೀಸಲಾತಿ ಕೋರುವ ಅಭ್ಯರ್ಥಿಗಳು:

- ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ
- ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ
- 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿತ ತಹಶೀಲ್ದಾರರವರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದೊಳಗಾಗಿ ಪ್ರಮಾಣ ಪತ್ರವನ್ನು ಪಡೆದು ಅರ್ಜಿಯೊಂದಿಗೆ ಸಲ್ಲಿಸಬೇಕು.
- ಮಾಜಿ ಸೈನಿಕರು:

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ01-04-1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ 21-10-1995 ರನ್ವಯ ನೇರ ನೇಮಕಾತಿಗಳಲ್ಲಿ ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ . ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತಿ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು ಕುಟುಂಬದವರು (ಸಂದರ್ಭಾನುಸಾರ)

2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು.

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

1) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು
2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ
3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

- **ಗ್ರಾಮೀಣ ಅಭ್ಯರ್ಥಿ:**
  ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ (ಅಭ್ಯರ್ಥಿಯು ಮೀಸಲಾತಿ ಕೋರಿದ್ದಲ್ಲಿ ನಿಗದಿತ ನಮೂನೆ -2 ರಲ್ಲಿ ಪ್ರಮಾಣಪತ್ರವನ್ನು ಲಗತ್ತಿಸಿರಬೇಕು)

- **ಕನ್ನಡ ಮಾಧ್ಯಮ ಅಭ್ಯರ್ಥಿ:**
  ಕನ್ನಡ ಮಾಧ್ಯಮ ವ್ಯಾಸಂಗ ಮಾಡಿದ್ದಲ್ಲಿ ಪ್ರಮಾಣ ಪತ್ರ (ಅಭ್ಯರ್ಥಿಯು ಮೀಸಲಾತಿ ಕೋರಿದ್ದಲ್ಲಿ ನಿಗದಿತ ನಮೂನೆಯಲ್ಲಿ ಪ್ರಮಾಣಪತ್ರವನ್ನು ಲಗತ್ತಿಸಿರಬೇಕು.

- **ಅಂಗವಿಕಲ ಅಭ್ಯರ್ಥಿಗಳು:**
  ಅಂಗವಿಕಲ ಅಭ್ಯರ್ಥಿ ಎಂದರೆ:

(ಅ) ಕಣ್ಣಿನ ದೃಷ್ಟಿಯನ್ನು ಸರಿಪಡಿಸುವ ಕನ್ನಡಕವನ್ನು ಹಾಕಿದಾಗ ಎರಡೂ ಕಣ್ಣಿನ ಪೈಕಿ ಉತ್ತಮವಾದ ಕಣ್ಣಿನಲ್ಲಿ 6:60 ಅಥವಾ 20:2000(ಸ್ನೆಲನ್) ಅನ್ನು ಮೀರದಿರುವ ದೃಷ್ಟಿ ಸಾಮಾರ್ಥ್ಯ ಇರುವ ವ್ಯಕ್ತಿ.

(ಆ) 20 ಡಿಗ್ರಿಗಳು ಅಥವಾ ಅದಕ್ಕೂ ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಟಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ.

(ಇ) ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿದ್ದವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

(ಈ) ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು ಕೇಳಿಸುವ ಅಥವಾ ಅರ್ಥವಾಗದ ಅಥವಾ ಎರಡೂ ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್‌ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯ) ಅಥವಾ ಎರಡೂ ಕಿವಿಗಳು ಶ್ರವಣ ಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರೀಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಉ) ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತ ಹೊಂದಿರುವ ಅರ್ಹರಾಗಿರುವುದಿಲ್ಲ.

(ಊ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.

(ಋ) ದೈಹಿಕ ಅಂಗವಿಕಲತೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ(ಆರ್ಥೋಪೆಡಿಕ್ ಸರ್ಜನ್)ರಿಂದ ದೈಹಿಕ ಅಂಗವಿಕಲತೆಯ ಮೌಲೀಕರಣವನ್ನು ಅಲ್ಪಿಕೊ ಕಾನ್ಪುರ್' (ಡಬ್ಲ್ಯೂಎಚ್.ಓ. ಸ್ಟ್ಯಾಂಡರ್ಡ್) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 115 ಸನನಿ 2005 ದಿನಾಂಕ:19-11-2005 ರಲ್ಲಿ ನಿಗದಿಪಡಿಸಿರುವ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಶೇ.40 ರಿಂದ 75 ಕ್ಕಿಂತ ಹೆಚ್ಚಾಗಿರಬಾರದು.

- **ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:**

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 23, ಸನನಿ 99 ದಿನಾಂಕ: 23-11-2000 ರನ್ವಯ ಯೋಜನೆಗಳಿಂದ ನಿರಾಶ್ರಿತರ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರಾಶ್ರಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಸಲ್ಲಿಸತಕ್ಕದ್ದು.

## 06. ಪಾಲಿಕೆಯೊಂದಿಗೆ ಪತ್ರ ವ್ಯವಹಾರ:

ಮಹಾನಗರಪಾಲಿಕೆಯು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಕಛೇರಿಯಿಂದ ಸೂಕ್ತ ಮಾಹಿತಿ ಪಡೆದು ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು.

## 07. ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸಬೇಕಾಗಿರುವ ಪ್ರಮಾಣ ಪತ್ರಗಳು:

1) ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ದಾಖಲೆಗಳನ್ನು ಅರ್ಜಿ ಸಲ್ಲಿಕೆಗೆ ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.
2) ಅಭ್ಯರ್ಥಿಯು ದೈಹಿಕವಾಗಿ ಆರೋಗ್ಯವಂತ ಮತ್ತು ಸಧೃಡಕಾಯರಾಗಿರುವ ಬಗ್ಗೆ ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿಯಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
3) ನೇರಪಾವತಿ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಸಂಬಂಧಿಸಿದಂತೆ ಮಹಾನಗರಪಾಲಿಕೆಯಲ್ಲಿ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ(ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್) ಹಾಜರಾತಿ ಮತ್ತು ವೇತನ ಪಡೆದ 2 ವರ್ಷದ ದಾಖಲಾತಿಗಳನ್ನು ಪರಿಗಣಿಸಲಾಗುವುದು.
4) ನೇರಪಾವತಿ, ಕ್ಷೇಮಾಭಿವೃದ್ದಿ, ದಿನಗೂಲಿ, ಗುತ್ತಿಗೆ, ಸಮಾನ ಕೆಲಸಕ್ಕೆ ಸಮಾನ ವೇತನ, ಹೊರಗುತ್ತಿಗೆ ಪೌರಕಾರ್ಮಿಕರು, ಲೋಡರ್ಸ್ ಮತ್ತು ಕ್ಲೀನರ್ಸ್ ಕೆಲಸ ನಿರ್ವಹಿಸುತ್ತಿರುವ 2 ವರ್ಷಗಳ ಮೇಲ್ಪಟ್ಟು, ದಾವಣಗೆರೆ ಮಹಾನಗರಪಾಲಿಕೆಯಿಂದ ವೇತನ ಪಡೆದ ದಾಖಲಾತಿಗಳನ್ನು ಪರಿಗಣಿಸಲಾಗುವುದು.

5) ಅಭ್ಯರ್ಥಿಗಳ ವಯಸ್ಸನ್ನು ಶೈಕ್ಷಣಿಕ ದಾಖಲಾತಿಗಳು ಅಥವಾ ಆಧಾರ್ ಕಾರ್ಡ್ ಅಥವಾ ಮತದಾರರ ಗುರುತಿನ ಚೀಟಿ ಅಥವಾ ಪಡಿತರ ಚೀಟಿ ಅಥವಾ ಪ್ರಾವಿಡೆಂಟ್ ಫಂಡ್ ಅಥವಾ ಇ.ಎಸ್.ಐ ದಾಖಲೆಗಳನ್ನಾಧರಿಸಿ ನಿರ್ಧರಿಸತಕ್ಕದ್ದು.

6) ಸೇವಾನುಭವಕ್ಕೆ ಸಂಬಂಧಿಸಿದಂತೆ ಪಾಲಿಕೆಯಿಂದ ಕನಿಷ್ಠ 02 ವರ್ಷ ಸೇವೆ ಸಲ್ಲಿಸಿರುವ ಬಗ್ಗೆ ಸಕ್ಷಮ ಪ್ರಾಧಿಕಾರ/ಗುತ್ತಿಗೆ ಸಂಸ್ಥೆ ನೀಡಿರುವ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

08. **ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ವಾಸ್ತವಿಕ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಮಾಹಿತಿಯನ್ನು ಮರೆಮಾಚಿರುವನೆಂದು, ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನ/ಅವಳ ಅಭ್ಯರ್ಥಿತ್ವವನ್ನು ರದ್ದುಪಡಿಸಿ ಕಾನೂನು ರೀತ್ಯಾ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

09. ಈ ಅಧಿಸೂಚನೆ ನೇಮಕಾತಿ ಆದೇಶವಲ್ಲ.

10. ಪೌರಕಾರ್ಮಿಕರ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಆಯುಕ್ತರು, ದಾವಣಗೆರೆ ಮಹಾನಗರಪಾಲಿಕೆ, ದಾವಣಗೆರೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.

12/01/2023.

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ
ಹಾಗೂ ಆಯುಕ್ತರು, ಮಹಾನಗರಪಾಲಿಕೆ ದಾವಣಗೆರೆ